ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 22-07-2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಪತ್ರಿಕಾಗೋಷ್ಠಿ:<br>ಆರ್. ವಿ. ದೇಶಪಾಂಡೆ, ಬೃಹತ್ತ ಮತ್ತು ಮಾಧ್ಯಮ ಕೈಗಾರಿಕಾ ಸಚಿವರು.<br>ಸಂಪರ್ಕ:<br>ರಾಜು ಅಡಕಲಿ,<br>ಮಾಧ್ಯಮ ಮತ್ತು ಸಾರ್ವಜನಿಕರ ಸಂಪರ್ಕ ಅಧಿಕಾರಿ,<br>ಮೊ. ಸಂಖ್ಯೆ 98453 66229 | 23-07-2016<br>ಶನಿವಾರ<br>ಅಪರಾಹ್ನ<br>12-00 ಗಂಟೆಗೆ | ಕೊಠಡಿ ಸಂಖ್ಯೆ 313,<br>ವಿಧಾನಸೌಧ ಸಮಿತಿ ಕೊಠಡಿ,<br>ಮೂರನೇ ಮಹಡಿ,<br>ಬೆಂಗಳೂರು. |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ಬರುವ ತಿಂಗಳಿಂದ ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಕೂಪನ್ ಆಧಾರಿತ ಪಡಿತರ ವಿತರಣೆ

ಬೆಂಗಳೂರು, ಜುಲೈ 22 (ಕರ್ನಾಟಕ ವಾರ್ತೆ)

ಮುಂದಿನ ತಿಂಗಳಿನಿಂದ ಬೃಹತ್ ಬೆಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಪಡಿತರ ಆಹಾರ ಪದಾರ್ಥಗಳನ್ನು ಕೂಪನ್ ಪದ್ದತಿಯಡಿ ವಿತರರಿಸಲಾಗುವುದೆಂದು ಹಾಗೂ ಮುಂದಿನ ಮೂರು ತಿಂಗಳಲ್ಲಿ ಎಲ್ಲ ಪಡಿತರ ವಿತರಣೆಯನ್ನು ಕೂಪನ್ ಮೂಲಕವೇ

ವಿತರಿಸಲಾಗುವುದೆಂದು ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ಸಚಿವ ಯು. ಟಿ. ಖಾದರ್ ತಿಳಿಸಿದರು.

ಅವರು ನಗರದಲ್ಲಿ ಇಂದು ಜಕ್ಕೂರಿನ ಬಳಿ ಇರುವ ಮಹಾತ್ಮಾಗಾಂಧಿ ಗ್ರಾಮೀಣ ಎನರ್ಜಿ ಪ್ರೋಗ್ರಾಂ ಸಂಸ್ಥೆಯಲ್ಲಿ ಇಂದು ಏರ್ಪಡಿಸಿದ್ದ ಉಪಗ್ರಹ ಆಧಾರಿತ ಸಂವಾದ ಕಾರ್ಯಕ್ರಮದಲ್ಲಿ ರಾಜ್ಯ ವ್ಯಾಪ್ತಿಯ ನ್ಯಾಯಬೆಲೆ ಅಂಗಡಿ ಮಾಲೀಕರೊಂದಿಗೆ ಸಂವಾದದಲ್ಲಿ ತಿಳಿಸಿದರು.

ಈಗಾಗಲೇ ಮೊಬೈಲ್ ಮೂಲಕ ಆಧಾರ ಸಂಪರ್ಕ ಹೊಂದಿರುವ ಪಡಿತರ ಚೀಟಿದಾರರಿಗೆ ಬರುವ ಸೆಪ್ಟೆಂಬರ್‌ನಿಂದ ಕೂಪನ್ ಪಡೆದು ಆಹಾರ ವಿತರಿಸಲಾಗುವುದೆಂದರು. ಇನ್ನೂ ಕೂಪನ್ ಪಡೆಯದವರು ಸ್ಥಳೀಯ ಪಂಚಾಯತ್ ವ್ಯಾಪ್ತಿಯಲ್ಲಿ ಕೂಪನ್ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಆಧಾರ್ ಕಾರ್ಡ್ ಹೊಂದಿರುವವರು ಮೊಬೈಲ್ ಮೂಲಕ ನೋಂದಣಿ ಮಾಡಲು 1614 ಗೆ ದೂರವಾಣಿ ಮಾಡಿದರೆ ಕೂಪನ್ ಸಂಖ್ಯೆ ದೊರಕುವುದು ಎಂದು ತಿಳಿಸಿದರು.

ಆಧಾರ್ ಮೂಲಕ ನೋಂದಣಿ ಮಾಡಲು ನ್ಯಾಯಬೆಲೆ ಅಂಗಡಿ ಮಾಲೀಕರು ಪೂರಕವಾಗಿ ಕಾರ್ಯನಿರ್ವಹಿಸುವಂತೆ ಸಚಿವರು ಸೂಚಿಸಿದರು. ಕೂಪನ್ ಪಡೆದ ಫಲಾನುಭವಿಗಳು ಹತ್ತಿರದ ಯಾವುದೇ ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಪಡೆಯಬಹುದಾಗಿದೆ. ಪ್ರತಿಯೊಬ್ಬ ಪಡಿತರ ಚೀಟಿದಾರರಿಗೂ ನಿಗದಿತ ಆಹಾರ ದೊರಕಬೇಕೆಂಬುದು ಸರ್ಕಾರದ ಒತ್ತಾಸೆಯಾಗಿದೆ. ಇದನ್ನು ನ್ಯಾಯಬೆಲೆ ಅಂಗಡಿಯವರು ಪ್ರಮಾಣಿಕವಾಗಿ ಕಾರ್ಯನಿರ್ವಹಿಸುವ ಮೂಲಕ ಜನತೆಗೆ ಅಗತ್ಯ ಜನಸ್ನೇಹಿ ಕೇಂದ್ರಗಳಾಗುವಂತೆ ಸಚಿವರು ಸೂಚಿಸಿದರು. ನ್ಯಾಯಬೆಲೆ ಅಂಗಡಿಗಳನ್ನು ನಗರ ಪ್ರದೇಶಗಳಲ್ಲಿ 800 ಕಾರ್ಡುಗಳನ್ನು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ 500 ಕಾರ್ಡುಗಳನ್ನು, ಅರಣ್ಯ ಪ್ರದೇಶದಲ್ಲಿ 100 ಕಾರ್ಡುಗಳಿಗೆ ಸೀಮಿತಗೊಳಿಸಲಾಗಿದೆ. ಹೆಚ್ಚು ಕಾರ್ಡುಗಳಿದ್ದಲ್ಲಿ ನೆರೆಯ ಅಂಗಡಿಗಳಿಗೆ ಮರು ಹಂಚಿಕೆ ಮಾಡಲಾಗುವುದೆಂದು ತಿಳಿಸಿದರು. ಇನ್ನು ಮುಂದೆ ಗೋದಾಮಿನಿಂದ ನೇರವಾಗಿ ನ್ಯಾಯಬೆಲೆ ಅಂಗಡಿಗಳ ಬಾಗಿಲಿಗೆ ಆಹಾರ ಧಾನ್ಯ ಪೂರೈಸಲು ಕ್ರಮ ಕೈಗೊಳ್ಳಲಾಗುವುದೆಂದರು. ಸರ್ಕಾರ ಇತ್ತೀಚೆಗೆ ನ್ಯಾಯಬೆಲೆ ಅಂಗಡಿಗಳ ಮಾಲೀಕರಿಗೆ ಲಾಭಾಂಶ ಹೆಚ್ಚಿಸಿ ಕ್ರಮ ಕೈಗೊಂಡಿದೆ. ಪ್ರತಿ ಕ್ವಿಂಟಾಲ್‌ಗೆ ನೀಡುತ್ತಿರುವ 50 ರೂ.ಗಳನ್ನು 100 ರೂ.ಗೆ ಹೆಚ್ಚಿಸಿದ್ದು ಆರಂಭದಲ್ಲಿ 90 ರೂ.ಗಳನ್ನು ನೀಡಲಾಗುವುದು. ಉಳಿದ ಇನ್ನೂ 10 ರೂ.ಗಳನ್ನು ನಂತರದ ದಿನಗಳಲ್ಲಿ ವಿತರಿಸಲಾಗುವುದೆಂದರು.

ನ್ಯಾಯಬೆಲೆ ಅಂಗಡಿಗಳವರು ತಮ್ಮಲ್ಲಿರುವ ದಾಸ್ತಾನುಗಳನ್ನು ಕಡ್ಡಾಯವಾಗಿ ಅಂಗಡಿ ಮುಂದೆ ಫಲಕಗಳಲ್ಲಿ ಪ್ರದರ್ಶಿಸಬೇಕು. ಇಲ್ಲದಿದ್ದರೆ ಕಠಿಣ ಕ್ರಮ ಕೈಗೊಳ್ಳಲಾಗುವುದೆಂದು ಸಚಿವರು ಹೇಳಿದರು. ಇದೇ ಸಂದರ್ಭದಲ್ಲಿ ಸಂವಾದ ಕಾರ್ಯಕ್ರಮದ ಮೊದಲು ಎಲ್ಲ ಪಡಿತರ ಅಂಗಡಿದಾರರ ಗಮನಕ್ಕೆ ಬರುವಂತೆ ಮುಖ್ಯಮಂತ್ರಿಗಳ ಸಂದೇಶವನ್ನು ಭಿತ್ತರಿಸಲಾಯಿತು.

ಸಮಾರಂಭದಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಪ್ರಧಾನ ಕಾರ್ಯದರ್ಶಿ ಹರ್ಷಗುಪ್ತ ಅವರು ಹಾಜರಿದ್ದರು.

ಬಾಬು/ಕೆಪಿಪಿ/ಕೆಎಂ

## ಸಚಿವರ ಪ್ರವಾಸ

**ಬೆಂಗಳೂರು, ಜುಲೈ 22 (ಕರ್ನಾಟಕ ವಾರ್ತೆ)**

**ಕಾರ್ಮಿಕ ಸಚಿವ ಶ್ರೀ ಸಂತೋಷ್ ಎಸ್. ಲಾಡ್, ಜುಲೈ 23 ಮತ್ತು 24 ರಂದು ಧಾರವಾಡ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವರು.**

**ಬಾಬು/ಕೆಎಂ**

## ಪರಿಷ್ಕೃತ ಕೀ ಉತ್ತರ ಪ್ರಕಟ

**ಬೆಂಗಳೂರು, ಜುಲೈ 22 (ಕರ್ನಾಟಕ ವಾರ್ತೆ)**

**ಕರ್ನಾಟಕ ಲೋಕಸೇವಾ ಆಯೋಗವು ಏಪ್ರಿಲ್ 10 ರಿಂದ 17 ರವರೆಗೆ ನಡೆಸಿದ ತಾಂತ್ರಿಕ ಹಾಗೂ ತಾಂತ್ರಿಕೇತರ ಹುದ್ದೆಗಳ ಸ್ಪರ್ಧಾತ್ಮಕ/ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಪ್ರಕಟಿಸಿದ ಕೀ ಉತ್ತರಗಳಿಗೆ ನಿಗದಿತ ಅವಧಿಯೊಳಗೆ ಸ್ವೀಕೃತವಾದ ಆಕ್ಷೇಪಣೆಗಳನ್ನು ವಿಷಯ ತಜ್ಞರುಗಳಿಂದ ಪರಿಶೀಲಿಸಿ ಪರಿಷ್ಕೃತ ಕೀ ಉತ್ತರಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ " http://kpsc.kar.nic.in/Key Answers"ರಲ್ಲಿ ಪ್ರಕಟಿಸಲಾಗಿದೆ.**

**ಬಾಬು:ಜಿಪಿಆರ್.**

## ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನ

ಬೆಂಗಳೂರು, ಜುಲೈ 22 (ಕರ್ನಾಟಕ ವಾರ್ತೆ)

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖಾವತಿಯಿಂದ ಅಕ್ಟೋಬರ್ 1 ರಂದು ವಿಶ್ವ ಹಿರಿಯ ನಾಗರಿಕರ ದಿನಾಚರಣೆಯನ್ನು ರಾಜ್ಯಮಟ್ಟದಲ್ಲಿ ಆಚರಿಸುವ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ (ಶಿಕ್ಷಣ, ಸಾಹಿತ್ಯ, ಕಲೆ, ಕಾನೂನು, ಕ್ರೀಡೆ ಹಾಗೂ ಸಮಾಜ ಸೇವೆ) ಗಣನೀಯ ಸೇವೆ ಸಲ್ಲಿಸಿದ ಹಿರಿಯ ನಾಗರಿಕರಿಗೆ 6 ವೈಯಕ್ತಿಕ ಪ್ರಶಸ್ತಿಗಳನ್ನು ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ 1 ಸಂಸ್ಥೆಗೆ ಒಟ್ಟು 7 ಪ್ರಶಸ್ತಿಗಳನ್ನು ನೀಡಲಾಗುವುದು.

ಆದ್ದರಿಂದ ವಿವಿಧ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿರಿಯ ನಾಗರಿಕರು ಹಾಗೂ ಸ್ವಯಂ ಸೇವಾ ಸಂಸ್ಥೆಗಳಿಗೆ ನೀಡುವ ರಾಜ್ಯ ಪ್ರಶಸ್ತಿಗಾಗಿ ಅರ್ಹರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಮೂಲಕ ಆಗಸ್ಟ್ 21 ರೊಳಗಾಗಿ ನಿರ್ದೇಶನಾಲಯಕ್ಕೆ ತಲುಪುವಂತೆ ಕನ್ನಡ ಭಾಷೆಯಲ್ಲಿ ನಿಗದಿತ ನಮೂನೆಯಲ್ಲಿ ದ್ವಿಪ್ರತಿಗಳಲ್ಲಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ **www.welfareofdisabled.kar.nic.in** ಪರಿಶೀಲಿಸಲು ಮತ್ತು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಇವರನ್ನು ಸಂಪರ್ಕಿಸಲು ಕೋರಿದೆ.

ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ 080–22860907, 080–22866046 ಸಂಪರ್ಕಿಸಬಹುದು.

ಬಾಬು:ಜಿಪಿಆರ್.

## ಗಾಳಿಪಟಕ್ಕೆ 'ಚೈನೀಸ್ ದಾರ್', 'ಚೈನೀಸ್ ಮಂಜ' ಬೇಡ

ಬೆಂಗಳೂರು, ಜುಲೈ 22 (ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರವು ಗಾಳಿಪಟ ಹಾರಿಸಲು ಬಳಸುವ ನೈಲಾನ್ ದಾರ, ಸಾಮಾನ್ಯವಾಗಿ ಕರೆಯಲ್ಪಡುವ "ಚೈನೀಸ್ ದಾರ್" ಅಥವಾ "ಚೈನೀಸ್ ಮಂಜ" ಅಥವಾ ಗಾಜು ಇಲ್ಲವೆ ಇತರ ಕೃತಕ ಜೈವಿಕವಲ್ಲದ ಹಾನಿಹಾರಕ ವಸ್ತುಗಳಿಂದ ತಯಾರಿಸಿದ ದಾರದ ಬಳಕೆಯಿಂದ ಪಕ್ಷಿ ಪ್ರಾಣಿ ಹಾಗೂ ಮಾನವನಿಗೆ ತೀವ್ರತರವಾದ ಗಾಯಗಳಾಗುವ ಸಾಧ್ಯತೆಗಳಿರುವ ಕಾರಣ ಹಾಗೂ ಇಂತಹ ದಾರಗಳು ಮಣ್ಣು, ನೀರು ಹಾಗೂ ಜಾನುವಾರುಗಳ ಮೇಲೆ ಪ್ರತಿಕೂಲ ಪರಿಣಾವನ್ನುಂಟುಮಾಡುವುದರ ಜೊತೆಗೆ ಪರಿಸರಕ್ಕೆ ಧಕ್ಕೆಯನ್ನುಂಟುಮಾಡುವ ಕಾರಣ, ಸಾರ್ವಜನಿಕ ಹಿತಾಸಕ್ತಿಯಲ್ಲಿ ಇಂತಹವುಗಳನ್ನು

ಸಂಪಾದಿಸುವುದು, ಸಂಗ್ರಹಿಸುವುದು, ಮಾರಾಟ ಮಾಡುವುದು ಹಾಗೂ ಬಳಕೆ ಮಾಡುವುದನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಷೇಧಿಸಿರುತ್ತದೆ.  ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ಸರ್ಕಾರ ಹಾಗೂ ಜಾರಿ ನಿರ್ದೇಶನಾಲಯದ ಅದಿಕಾರಿಗಳೊಂದಿಗೆ ಸಹಕರಿಸಲು ಅರಣ್ಯ ಇಲಾಖೆ ಪ್ರಕಟಣೆ ಕೋರಿದೆ.

ಬಾಬು:ಜಿಪಿಆರ್.

# Ban on 'Chainese Dor', 'Chainese Manja'

Bengaluru July 22 (Karnataka Information)

The Government of Karnataka has imposed a ban on procuring, stocking, sale and use of nylon thread commonly know as Chinese Dor or Chinese Manja or other synthetic (Non bio-degradable) threads coasted with glass or other harmful substances used for kite flying or other purposes likely to cause grievous injury and inconvenience to birds, animals as well as human beings, with immediate effect in the interest of public.

Further, those threads also adversely affect soil, water, cattle and damage the environment. Hence, the general public is requested to co-operate with the Government and the law enforcement authorities.

babu:gpr

# ಕನಿಷ್ಠ ವೇತನ ಪರಿಷ್ಕರಣೆ

ಬೆಂಗಳೂರು, ಜುಲೈ 22 (ಕರ್ನಾಟಕ ವಾರ್ತೆ)

”ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಟ್ಟಣ ಮತ್ತು ಗ್ರಾಮ ಪಂಚಾಯತಿ ಸಂಸ್ಥೆಗಳು" ಅನುಸೂಚಿತ ಉದ್ದಿಮೆಗೆ ಸಂಬಂಧಿಸಿದಂತೆ, ಕನಿಷ್ಠ ವೇತನ ದರಗಳನ್ನು ಪರಿಷ್ಕರಿಸುವ ಸಂಬಂಧ ಸರ್ಕಾರವು ಕರಡು ಅಧಿಸೂಚನೆಯನ್ನು ಮೇ 22 ರಂದು ಹೊರಡಿಸಿದದು, ಅಂತಿಮ ಅಧಿಸೂಚನೆಯನ್ನು ಹೊರಡಿಸಲು ಸರ್ಕಾರದ ಹಂತದಲ್ಲಿ ಇನ್ನೂ ಬಾಕಿ ಇರುತ್ತದೆ.

ಖಾಸಗಿ ಪ್ರಕಾಶನ ಸಂಸ್ಥೆಗಳು ಸದರಿ ಅನುಸೂಚಿತ ಉದ್ದಿಮೆಯನ್ನೂ ಸೇರಿಸಿದಂತೆ ಇತರೆ ಅನುಸೂಚಿತ ಉದ್ದಿಮೆಗಳಿಗೆ ಅನ್ವಯವಾಗುವ ಕನಿಷ್ಠ ವೇತನ ದರಗಳನ್ನು ಮುದ್ರಿಸಿರುವ ಪುಸ್ತಕಗಳಲ್ಲಿ ಲೋಪದೋಷಗಳಿರುವುದಾಗಿ ಸಾರ್ವಜನಿಕರುಗಳೂ ತಿಳಿಸಿರುತ್ತಾರೆ.

"ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಟ್ಟಣ ಮತ್ತು ಗ್ರಾಮ ಪಂಚಾಯತಿ ಸಂಸ್ಥೆಗಳು" ಅನುಸೂಚಿತ ಉದ್ದಿಮೆಯ ಕನಿಷ್ಠ ವೇತನ ದರಗಳು ಪರಿಷ್ಕರಣೆಯಾಗುವವರೆಗೆ 2015–16 ನೇಸಾಲಿನಲ್ಲಿ ಚಾಲ್ತಿಯಲ್ಲಿದ್ದ ಕನಿಷ್ಠ ವೇತನ ದರಗಳಿಗೆ ಈ ಸಾಲಿನ ಮಾಸಿಕ ವಿ.ಡಿ.ಎ (ವ್ಯತ್ಯಾಸ ತುಟ್ಟಿ ಭತ್ಯೆ) ರೂ 398–40 ಮೊತ್ತವನ್ನು ಸೇರಿಸಿದಲ್ಲಿ 2016–17ನೇಸಾಲಿನಕನಿಷ್ಠ ವೇತನ ದರಗಳಾಗುತ್ತವೆಂಬ ಸ್ಪಷ್ಟೀಕರಣವನ್ನು ಕಾರ್ಮಿಕ ಇಲಾಖೆ ಪ್ರಕಟಣೆ ತಿಳಿಸಿದೆ

ಬಾಬು:ಜಿಪಿಆರ್.

# ಕಬ್ಬನ್ ಉದ್ಯಾನದಲ್ಲಿ ಈ ಭಾನುವಾರ

ಬೆಂಗಳೂರು, ಜುಲೈ 22 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ: 24–07–2016ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ" ಎಂಬ ಶೀರ್ಷಿಕೆಯಡಿ ಶ್ರೀಮತಿ ರಾಧಾಬಾಯಿ ಮಾದಾರ್ ಮತ್ತು ತಂಡದವರಿಂದ ಸುಗಮ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ" ಎಂಬ ಶೀರ್ಷಿಕೆಯಡಿ ಶ್ರೀ ನರಸಿಂಹಯ್ಯ ಮತ್ತು ತಂಡದವರಿಂದ ಜಾನಪದ ಗೀತೆಗಳ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3. ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
4. ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ(ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
5. ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ **Cut Fruits, Dry Fruits** ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
6. ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ-ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳ ಮಾರಾಟವನ್ನು ವಿಧಾನಸೌಧ ಮತ್ತು ಹೈಕೋರ್ಟ್ ಮುಂಭಾಗದ ಮೆಟ್ರೊ ನಿಲ್ದಾಣದ ಹತ್ತಿರ ಕೈಗೊಳ್ಳುತ್ತಾರೆ.

7. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

**I.**ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಶ್ರೀ ಗಿರಿಧರ್ ಮತ್ತು ತಂಡದವರಿಂದ ಕರ್ನಾಟಿಕ್ ವೋಕಲ್ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ ಶ್ರೀ ವಾಣಿ ವಿದ್ಯಾ ಕೇಂದ್ರ, ರಾಜಾಜಿನಗರ, ಬೆಂಗಳೂರು ಶಾಲಾ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 09.00 ಗಂಟೆಯಿಂದ 10.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ ಬಾಲ ಭವನ ಸದಸ್ಯ ಮಕ್ಕಳಿಂದ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ

**II.**ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ

- ರಿಕ್ರಿಯೋ ಅಗ್ರೋ ಪ್ರೈವೇಟ್ ಲಿಮಿಟೆಡ್ ಬೆಂಗಳೂರು ರವರ ವತಿಯಿಂದ ಬೆಳಿಗ್ಗೆ 6.00 ಗಂಟೆಯಿಂದ ಮದ್ಯಾಹ್ನ 12.00 ಗಂಟೆಯವರೆಗೆ ಶಾಲಾ ಮಕ್ಕಳಿಗೆ ಪರಿಸರ ಕುರಿತ ಜಾಗೃತಿ ಕಾರ್ಯಕ್ರಮ ಮತ್ತು ಉತ್ತಮ ನಡುವಳಿಕೆಗಳ ಬಗ್ಗೆ ಮಾಹಿತಿ ನೀಡುವ ಕಾರ್ಯಕ್ರಮವನ್ನು ಏರ್ಪಡಿಲಾಗಿದೆ.

- ಬೆಳಿಗ್ಗೆ 8.00 ರಿಂದ ಸಂಜೆ 4.00 ಗಂಟೆಯವರಿಗೆ ಡಾ. ರಾಜ್‌ಕುಮಾರ್ (ಅಪ್ಪಾಜಿ) ಹೆಲ್ತ್ ಕೇರ್ ಅಸೋಸಿಯೆಷನ್, ಬೆಂಗಳೂರು ರವರಿಂದ ಸಾರ್ವಜನಿಕರಿಗೆ ರಕ್ತದಾನದ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರಮ ಮತ್ತು ರಕ್ತದಾನ ಶಿಭಿರವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 7.00 ರಿಂದ ಬೆಳಿಗ್ಗೆ 10.00 ಘಂಟೆಯವರೆಗೆ ಯೋಗ ಪ್ರಾಣ ವಿದ್ಯಾ ಸಂಸ್ಥೆಯ **Soham Healing Center,** ಆರ್.ಟಿ. ನಗರ ಬೆಂಗಳೂರು ರವರ ವತಿಯಿಂದ ಪ್ರಾಣ ಚಿಕಿತ್ಸೆ ನೀಡುವ ಕಾರ್ಯಕ್ರಮವನ್ನು ಉಚಿತವಾಗಿ ಏರ್ಪಡಿಸಲಾಗಿದೆ.
- ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ವಿದ್ಯಾರಣ್ಯ ಸಂಸ್ಥೆಯು ನಡೆಸುತ್ತಿರುವ ಉದ್ಯೋಗಸ್ಥ ವಿಲಕಚೇತನ ಮಹಿಳೆಯರು ಸಿದ್ದಪಡಿಸಿದ ಗೃಹಪಯೋಗಿ ವಸ್ತುಗಳ ಪ್ರದರ್ಶನ ಮತ್ತು ಮಾರಾಟವನ್ನು ಏರ್ಪಡಿಸಲಾಗಿದೆ.

ಬಾಬು:ಜಿಪಿಆರ್.